ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

5

**ಪತ್ರಿಕಾ ತುಣುಕುಗಳು**

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಲೋಕಸಭಾ ಸ್ಪೀಕರ್

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE 22/11/20

## ಚಳಿಗಾಲದ ಸಂಸತ್ ಅಧಿವೇಶನ ನಡೆಸಲು ಸಿದ್ಧವೆಂದ ಸ್ಪೀಕರ್

**ಹೊಸದಿಲ್ಲಿ:** ರಾಷ್ಟ್ರರಾಜಧಾನಿಯಲ್ಲಿ ಕೊರೊನಾ ಸೋಂಕಿತರ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಿರುವುದರ ನಡುವೆಯೇ, ಅಗತ್ಯ ಮುನ್ನೆಚ್ಚರಿಕೆಗಳೊಂದಿಗೆ ಸಂಸತ್‌ನ ಚಳಿಗಾಲದ ಅಧಿವೇಶನ ನಡೆಸಲು ಸಿದ್ಧವಿರುವುದಾಗಿ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ತಿಳಿಸಿದ್ದಾರೆ. ಶನಿವಾರ ಸುದ್ದಿಗಾರರ ಜತೆ ಮಾತನಾಡಿದ ಅವರು, ''ಸಂಸತ್ ಅಧಿವೇಶನ ನಡೆಸಲು ಲೋಕಸಭಾ



ಸಚಿವಾಲಯವು ಸಿದ್ಧವಿದೆ. ಅಧಿವೇಶನದ ದಿನಾಂಕವನ್ನು ಸಂಸದೀಯ ವ್ಯವಹಾರಗಳ ಕುರಿತಾದ ಸಂಪುಟ ಸಮಿತಿ ತೀರ್ಮಾನಿಸಬೇಕಿದೆ,'' ಎಂದು ತಿಳಿಸಿದರು. ಸಂಸದರಿಗಾಗಿ 76 ವಸತಿಗೃಹಗಳನ್ನು 188 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗಿದ್ದು, ನ.23ರಂದು ಪ್ರಧಾನಿ ಅವರಿಂದ ಉದ್ಘಾಟನೆ ನೆರವೇರಲಿದೆ ಎಂದೂ ಸ್ಪೀಕರ್ ಮಾಹಿತಿ ನೀಡಿದರು.